# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು – 572 103
ದೂರವಾಣಿ: 0816-2254546, 0816-2255596, 0816-2255597 ಫ್ಯಾಕ್ಸ್: 0816-2270719

ಸಂಖ್ಯೆ:ತು.ವಿ: DST-SERB:ಖ.ಕೋ:2022-23/ 3245 ದಿನಾಂಕ: 19.09.2022

**ದರಪಟ್ಟಿ ಆಹ್ವಾನ (ವಿ.ವಿ ವೆಬ್ ಸೈಟ್ ಮುಖಾಂತರ)**

ವಿಷಯ: DST-SERB ಯ ಸಂಶೋಧನಾ ಯೋಜನೆಯಡಿಯ ಅನುದಾನದಲ್ಲಿ ಉಪಕರಣಗಳನ್ನು ಸರಬರಾಜು ಪಡೆಯಲು ದರಪಟ್ಟಿ ಆಹ್ವಾನಿಸುವ ಕುರಿತು.

ಉಲ್ಲೇಖ: 1. ಡಾ. ಗಿರೀಶ್ ಕೆ. ಎಸ್., ಪ್ರಧಾನ ಸಂಶೋಧಕರು ಮತ್ತು ಪ್ರಾಧ್ಯಾಪಕರು (DST-SERB Project), ಜೀವರಸಾಯನ ಶಾಸ್ತ್ರ ಅಧ್ಯಯನ & ಸಂಶೋಧನಾ ವಿಭಾಗ, ತು.ವಿ.ತು ಇವರ ಮನವಿ ಪತ್ರ ದಿನಾಂಕ: 06.07.2022.

2. 21 ನೇ ಖರೀದಿ ಸಮಿತಿ ಸಭಾ ನಿರ್ಣಯ ದಿನಾಂಕ: 24.08.2022.

3. ವಿ.ವಿ ಅಧಿಸೂಚನೆ ಪತ್ರದ ಸಂಖ್ಯೆ: ತುವಿತು:ಕೆ.ಟಿ.ಪಿ.ಪಿ/ತಿ.ಪ/ಖ.ಕೋ/2022-23/3095 ದಿನಾಂಕ: 09.09.2022.

4. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ: 17.09.2022 (ಕಂಡಿಕೆ-54).

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (01) ರ ಮನವಿಯ ಮೇರೆಗೆ DST-SERB ಯಿಂದ ಮಂಜೂರಾಗಿರುವ "Histone Induced Death and Aggregation: Mitigation by Quercetin and Quercetin and Quercetin-3 Rutinosie" ಸಂಶೋಧನಾ ಯೋಜನೆಯಡಿಯಲ್ಲಿ ಉಪಕರಣಗಳನ್ನು ಸರಬರಾಜು ಪಡೆಯಲು ಉಲ್ಲೇಖ (02) ಮತ್ತು (03) ರ ಅನ್ವಯ ಹಾಗೂ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಆಸಕ್ತ ನೋಂದಾಯಿತ ಸಂಸ್ಥೆಗಳಿಂದ ಈ ಕೆಳಕಂಡ ಕೋಷ್ಟಕದಲ್ಲಿ ವಿವರಿಸಿರುವಂತೆ ದರಪಟ್ಟಿಗಳನ್ನು ಆಹ್ವಾನಿಸಿದೆ.

| Sl No | Description of Goods | Cat No | Company | Qty | Rate to be quoted Including all taxes and service |
|---|---|---|---|---|---|
| 1 | SYTOX™ Green Nucleic Acid Stain - 5 mM Solution in DMSO | S7020 | Thermo Fischer Scientific | 01 | |
| 2 | Invitrogen™ Dead Cell Apoptosis Kits with Annexin V for Flow Cytometry | V13241 | Thermo Fischer Scientific | 01 | |
| 3 | Invitrogen™ MitoSOX™ Red Mitochondrial Superoxide Indicator, for live-cell imaging | M36008 | Thermo Fischer Scientific | 01 | |
| 4 | PageRuler™ Plus Prestained Protein Ladder, 10 to 250 kDa Thermo Scientific™ | 26619 | Thermo Fischer Scientific | 01 | |
| 5 | Invitrogen CD62P (P-Selectin) Monoclonal Antibody (AK-4), eBioscience™ | 14-0628-82 | Thermo Fischer Scientific | 01 | |
| 6 | Autophagy Antibody Sampler Kit | 4445 | Cell Signaling Technology | 01 | |
| 7 | ER Stress Antibody Sampler Kit | 9956 | Cell Signaling Technology | 01 | |

**ಷರತ್ತು ಮತ್ತು ನಿಬಂಧನೆಗಳು**

1. ಮುಚ್ಚಿದ ಲಕೋಟೆಯ ಮೇಲೆ **"Laboratory Equipments to DOSR in Bio Chemestry (DST-SERB)"** ಸರಬರಾಜು ಮಾಡಲು ದರಪಟ್ಟಿ ಎಂದು ನಮೂದಿಸುವುದು.
2. ಈ ದರಪಟ್ಟಿಯು ಕೆ.ಟಿ.ಪಿ.ಪಿ ನಿಯಮ 4(i) (ii) ರ ತಿದ್ದುಪಡಿ ವಿಧೇಯಕದಂತೆ, ಅನ್ವಯಿಸಿರುತ್ತದೆ.
3. ತುಮಕೂರು ವಿಶ್ವವಿದ್ಯಾನಿಲಯವು **DSIR** ನೊಂದಾಣಿ ಪ್ರಮಾಣ ಪತ್ರವನ್ನು ಹೊಂದಿದ್ದು, ಅನ್ವಯಿಸಿದ್ದಲ್ಲಿ ಅದರಂತೆ ತೆರಿಗೆಯಲ್ಲಿ ವಿನಾಯಿತಿ ನೀಡಿ ದರಗಳನ್ನು ನಮೂದಿಸತಕ್ಕದ್ದು.
4. ದರಪಟ್ಟಿಯೊಂದಿಗೆ ತಮ್ಮ ಸಂಸ್ಥೆಯು ನೊಂದಾಣಿಯಾಗಿರುವ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಲಗತ್ತಿಸತಕ್ಕದ್ದು.



ಮುಂದುವರೆದಿದೆ...

5. ಸದರಿ ದರಪಟ್ಟಿಯು ಒಂದು ಲಕ್ಷ ಮೀರಿದ ಸಾಮಗ್ರಿಗಳು/ಸೇವೆಗಳಿಗೆ ಸಂಬಂಧಿಸಿರುವುದರಿಂದ ಸದರಿ ಸೇವೆಗೆ ಕೆ.ಟಿ.ಪಿ.ಪಿ ನಿಯಮಾನುಸಾರ ರೂ.5,895/- ಗಳ ಇ.ಎಂ.ಡಿ ಮೊತ್ತವಾಗಿ Banker's guarantee / Demand Draft / Pay Order/FDR in favor of "Finance Officer, Tumkur University" payable at Tumakuru ಇವರಿಗೆ ದರಪಟ್ಟಿಯೊಂದಿಗೆ ಸಲ್ಲಿಸತಕ್ಕದ್ದು.

6. ದರಪಟ್ಟಿಯ ಜೊತೆಗೆ ಇತರೆ ಸರ್ಕಾರಿ ಇಲಾಖೆಗಳಿಗೆ ಸರಬರಾಜಿನ ಸಂಬಂಧದ ಕಾರ್ಯಾದೇಶಗಳು ಮತ್ತು ಸೇವಾ ತೃಪ್ತಿದಾಯಕ ಪ್ರಮಾಣ ಪತ್ರಗಳನ್ನು (**Performance/Satisfactory Certficate**) ಕಡ್ಡಾಯವಾಗಿ ಲಗತ್ತಿಸತಕ್ಕದ್ದು.

7. ದರಪಟ್ಟಿಗಳನ್ನು ಕುಲಸಚಿವರು, ವಿಶ್ವವಿದ್ಯಾನಿಲಯ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ಬಿ.ಹೆಚ್.ರಸ್ತೆ ತುಮಕೂರು-572 103, ಇವರಿಗೆ ಮುದ್ದಾಂ ಅಥವಾ ಅಂಚೆಯ ಮೂಲಕ ತಲುಪಿಸಬಹುದು. ಅಂಚೆಯ ವಿಳಂಬಕ್ಕೆ ಅಥವಾ ಅಂಚೆಯು ತಲುಪದಿದ್ದಕ್ಕೆ ವಿಶ್ವವಿದ್ಯಾನಿಲಯವು ಜವಾಬ್ದಾರರಾಗುವುದಿಲ್ಲ.

8. ದರಪಟ್ಟಿಯನ್ನು ಸಲ್ಲಿಸಲು ಕೊನೆಯ **ದಿನಾಂಕ: 01.10.2022 ಅಪರಾಹ್ನ 03.00 ಗಂಟೆ.**

9. ದರಪಟ್ಟಿಯನ್ನು **ದಿನಾಂಕ: 03.10.2022 ರಂದು ಅಪರಾಹ್ನ 12.00** ಕ್ಕೆ ತೆರೆಯಲಾಗುವುದು.

10. ಸಂಸ್ಥೆಯವರು ತಮ್ಮ ಸಂಸ್ಥೆಯ GSTIN No. ಮತ್ತು PAN No. ದಾಖಲೆಗಳನ್ನು ಕಡ್ಡಾಯವಾಗಿ ದರಪಟ್ಟಿಯ ಜೊತೆಗೆ ಲಗತ್ತಿಸಬೇಕು.

11. ದರಪಟ್ಟಿಯಲ್ಲಿ ನಮೂದಿಸಿದ ದರಗಳು ತೆರಿಗೆ ಮತ್ತು ಸೇವೆ ವೆಚ್ಚವನ್ನು ಒಳಗೊಂಡಿರತಕ್ಕದ್ದು.

12. ದರಪಟ್ಟಿಯ ಅವಧಿಯು ದರಪಟ್ಟಿಯನ್ನು ತೆರೆದ ದಿನಾಂಕದಿಂದ 60 ದಿನಗಳ ಅವಧಿಯವರೆಗೆ ಚಾಲ್ತಿಯಲ್ಲಿರಬೇಕು.

13. ದರಪಟ್ಟಿ ಸಲ್ಲಿಸುವ ಸಂಸ್ಥೆಯವರು ಅಧಿಕೃತ ಮಾರಾಟಗಾರರು/ಸರಬರಾಜುದಾರರು/ತಯಾರಕರು ಆಗಿದ್ದಲ್ಲಿ ದಾಖಲೆಗಳನ್ನು ಲಗತ್ತಿಸುವುದು.

14. ಸರಬರಾಜು ಮಾಡಿದ 30 ದಿನಗಳೊಳಗೆ ಹುಂಡಿಯನ್ನು ಪಾವತಿಸಲಾಗುವುದು.

15. ದರಪಟ್ಟಿಗಳನ್ನು ಯಾವುದೇ ಕಾರಣ ನೀಡದೆ ಅಂಗೀಕರಿಸುವ ಅಥವಾ ತಿರಸ್ಕರಿಸುವ ಪೂರ್ಣ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿದೆ.

16. ವಿಶ್ವವಿದ್ಯಾನಿಲಯವು ಒಂದು ವೇಳೆ ತಮ್ಮ ದರಪಟ್ಟಿಯನ್ನು ತಾತ್ಕಾಲಿಕವಾಗಿ ಅಂಗೀಕರಿಸಿದ್ದಲ್ಲಿ ಮಾದರಿ ಉಪಕರಣಗಳನ್ನು ವಿಶ್ವವಿದ್ಯಾನಿಲಯವು ಸೂಚಿಸುವಂತಹ ವಿಭಾಗಕ್ಕೆ ಸಲ್ಲಿಸಿ ಪ್ರಚುರಪಡಿಸತಕ್ಕದ್ದು

17. ತಮ್ಮ ದರಪಟ್ಟಿಯಲ್ಲಿ ಪ್ರತಿ ಸಾಮಗ್ರಿವಾರು ದರಗಳನ್ನು ನಮೂದಿಸುವುದು. (ಎಲ್ಲಾ ತೆರಿಗೆ ಮತ್ತು ಸರಬರಾಜು ವೆಚ್ಚ ಒಳಗೊಂಡಿರತಕ್ಕದ್ದು.)

18. ತಮ್ಮ ಸಂಸ್ಥೆಯು ಸರಬರಾಜು ಮಾಡಲು ಉದ್ದೇಶಿಸಿರುವ ಪ್ರಯೋಗಾಲಯದ ಉಪಕರಣಗಳ ಸಂರಚನೆಗಳಲ್ಲಿ ವ್ಯತ್ಯಾಸ ಇದ್ದರೆ ಸಂರಚನೆಗಳ ಮಾಹಿತಿ/ಮಾದರಿ ಸಂಖ್ಯೆಗಳನ್ನು ದರಪಟ್ಟಿಯೊಂದಿಗೆ ಕಡ್ಡಾಯವಾಗಿ ಸಲ್ಲಿಸುವುದು.

19. ದರಪಟ್ಟಿಗಳನ್ನು ಯಾವುದೇ ಕಾರಣ ನೀಡದೆ ಅಂಗೀಕರಿಸುವ ಅಥವಾ ತಿರಸ್ಕರಿಸುವ ಸಂಪೂರ್ಣ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿದೆ.

20. ಸಂಸ್ಥೆಯ ಯಾವುದೇ ಷರತ್ತುಬದ್ಧ ದರಪಟ್ಟಿಗಳನ್ನು ಪರಿಗಣಿಸಲಾಗುವುದಿಲ್ಲ.

21. ಪ್ರತಿ ಸಂಸ್ಥೆಯವರು ಏಕೈಕ ದರಪಟ್ಟಿಯನ್ನು ಮಾತ್ರ ಸಲ್ಲಿಸತಕ್ಕದ್ದು.

22. ವಿಶ್ವವಿದ್ಯಾನಿಲಯವು ಕಾರ್ಯಾದೇಶದಲ್ಲಿ ನೀಡುವ ಎಲ್ಲಾ ಷರತ್ತುಗಳನ್ನು ಪಾಲಿಸಬೇಕು.

23. ಹೆಚ್ಚಿನ ವಿವರಗಳು ಅಥವಾ ಮಾಹಿತಿಯ ಅಗತ್ಯವಿದ್ದಲ್ಲಿ ಡಾ. ಗಿರೀಶ್ ಕೆ. ಎಸ್., ಪ್ರಧಾನ ಸಂಶೋಧಕರು ಮತ್ತು ಪ್ರಾಧ್ಯಾಪಕರು (DST-SERB Project), ಜೀವರಸಾಯನ ಶಾಸ್ತ್ರ ಅಧ್ಯಯನ & ಸಂಶೋಧನಾ ವಿಭಾಗ , ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರನ್ನು ಸಂಪರ್ಕಿಸಬಹುದು.

ಆದೇಶದ ಮೇರೆಗೆ,

19/09/2022

ಉಪಕುಲಸಚಿವರು

~~ಕುಲಸಚಿವರು~~

(ಸಾಮಾನ್ಯ ವಿಭಾಗ)

ತುಮಕೂರು ವಿಶ್ವವಿದ್ಯಾನಿಲಯ

ಪ್ರತಿಗಳು:

1. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಸಿಸ್ಟಂ ಅನಾಲಿಸಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. (ಇಂದೇ ವೆಬ್‌ಸೈಟ್‌ನಲ್ಲಿ ಪ್ರಕಟಿಸಬಹುದಾಗಿರಿದೆ)
3. ಡಾ. ಗಿರೀಶ್ ಕೆ. ಎಸ್., ಪ್ರಧಾನ ಸಂಶೋಧಕರು ಮತ್ತು ಪ್ರಾಧ್ಯಾಪಕರು (DST-SERB Project), ಜೀವರಸಾಯನ ಶಾಸ್ತ್ರ ಅಧ್ಯಯನ & ಸಂಶೋಧನಾ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ತುಮಕೂರು ವಿಶ್ವವಿದ್ಯಾನಿಲಯದ ಸೂಚನಾ ಫಲಕ.
5. ಕಚೇರಿ ಪ್ರತಿ.